ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನದ ಚುನಾವಣೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

187 (241) ಮಾನ್ಯ ಪೌರಾಡಳಿತ ಮತ್ತು ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯ್ತಿ, ಪುರಸಭೆ ಹಾಗೂ ನಗರಸಭೆಗಳ ಅಧ್ಯಕ್ಷ/ಉಪಾಧ್ಯಕ್ಷರ ಹುದ್ದೆಗಳಿಗೆ ಕಳೆದ 2 ವರ್ಷಗಳಿಂದ ಚುನಾವಣೆ ನಡೆಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸದಿರುವ ಸ್ಥಳೀಯ ಸಂಸ್ಥೆಗಳ ಒಟ್ಟು ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಸದರಿ ಸಂಸ್ಥೆಗಳ ಅಧ್ಯಕ್ಷ/ಉಪಾಧ್ಯಕ್ಷರ ಸ್ಥಾನಕ್ಕೆ ಇದುವರೆವಿಗೆ ಚುನಾವಣೆ ನಡೆಸದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳಿಗೆ ಚುನಾವಣೆ ನಡೆಸಲಾಗುವುದು ?